## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 901 (1051)
ಸದಸ್ಯರ ಹೆಸರು: ಶ್ರೀ ಎನ್. ರವಿಕುಮಾರ್, (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ: 14.12.2023
ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳಿಗೆ ಯಾವ ದಿನಾಂಕದಂದು ಇಲಾಖಾ ವಿಚಾರಣೆಯ ಸಂಬಂಧ ನೋಟಿಸ್ ನೀಡಲಾಗಿದೆ; ಯಾವ ಅಧಿಕಾರಿಗಳನ್ನು ವಿಚಾರಣಾ ಅಧಿಕಾರಿಯನ್ನಾಗಿ ನೇಮಿಸಲಾಗಿದೆ; ಇದುವರೆಗೆ ಎಷ್ಟು ದಿನಗಳ ಕಾಲ ಇಲಾಖಾ ವಿಚಾರಣೆ ನಡೆಸಲಾಗಿದೆ; ದಿನಾಂಕದೊಂದಿಗೆ ಮಾಹಿತಿ ನೀಡುವುದು | ಐ.ಎಂ.ಎ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂದು ಸಿಬಿಐ ತನಿಖಾ ವರದಿಯಲ್ಲಿ ಆರೋಪಿಸಲಾದ ಐಪಿಎಸ್ ಅಧಿಕಾರಿಗಳಾದ ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಹಾಗೂ ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರಿಗೆ ಕ್ರಮವಾಗಿ ದಿನಾಂಕ: 02.02.2021 ರಂದು ಹಾಗೂ 01.02.2021 ರಂದು ದೋಷಾರೋಪಣಾ ಪಟ್ಟಿ ಜಾರಿ ಮಾಡಲಾಗಿತ್ತು.<br><br>ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರ ಇಲಾಖಾ ವಿಚಾರಣೆ ಕುರಿತಂತೆ ಶ್ರೀ ಕೆ ಎನ್ ತಮ್ಮಯ್ಯ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯವರನ್ನಾಗಿ ಹಾಗೂ ಶ್ರೀ ಎಸ್ ಮುರುಗನ್, ಐಪಿಎಸ್ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿತ್ತು.<br><br>ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರ ಇಲಾಖಾ ವಿಚಾರಣೆ ಕುರಿತಂತೆ ಶ್ರೀ ಜಿ. ವಿ ಕೃಷ್ಣ ರಾವ್, (ನಿವೃತ್ತ ಭಾ.ಆ.ಸೇ) ಇವರನ್ನು ವಿಚಾರಣಾಧಿಕಾರಿಯವರನ್ನಾಗಿ ಹಾಗೂ ಶ್ರೀ ಸುಬ್ರಮಣ್ಯೇಶ್ವರ ರಾವ್, ಐಪಿಎಸ್ ಇವರನ್ನು ಮಂಡನಾಧಿಕಾರಿಯವರನ್ನಾಗಿ ನೇಮಕ ಮಾಡಲಾಗಿತ್ತು.<br><br>ಈ ಇಬ್ಬರು ಅಧಿಕಾರಿಗಳ ಇಲಾಖಾ ವಿಚಾರಣೆ ಮುಕ್ತಾಯಗೊಂಡಿದ್ದು ಇಲಾಖಾ ವಿಚಾರಣೆಯಲ್ಲಿ ಸದರಿ ಅಧಿಕಾರಿಗಳ ವಿರುದ್ಧ ಆರೋಪಗಳು ಸಾಬೀತಾಗಿರುವುದಿಲ್ಲ. ಇಲಾಖಾ ವಿಚಾರಣೆಗಳನ್ನು ಮುಕ್ತಾಯಗೊಳಿಸಲಾಗಿದೆ. |

--2

| | | |
|---|---|---|
| ಆ) | ತನಿಖಾ ಸಂಸ್ಥೆಯು ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದೆ; ಹಾಗೂ ಯಾವ ದಿನಾಂಕದಂದು ಮಾಡಿದೆ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು | ತನಿಖಾ ಸಂಸ್ಥೆಯು ಆರೋಪಿತ ಅಧಿಕಾರಿಗಳ ವಿರುದ್ಧ ಅಭಿಯೋಜನಾ ಮಂಜೂರಾತಿಗೆ ಹಾಗೂ ಶಿಸ್ತು ಕ್ರಮಕ್ಕೆ ದಿನಾಂಕ: 18.12.2019 ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತದೆ.<br>ಅದರಂತೆ, ದಿನಾಂಕ: 01.02.2021 ಹಾಗೂ 02.02.2021 ರಂದು ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿ ಇಲಾಖಾ ವಿಚಾರಣೆಯನ್ನು ಪ್ರಾರಂಭಿಸಲಾಗಿತ್ತು. ಸದರಿ ಇಲಾಖಾ ವಿಚಾರಣೆಗಳಲ್ಲಿ ಆರೋಪಗಳು ಸಾಬೀತಾಗದೇ ಇರುವುದರಿಂದ ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗಿದೆ.<br><br>ತನಿಖಾ ಸಂಸ್ಥೆಯ ಕೋರಿಕೆಯಂತೆ ಆರೋಪಿತ ಅಧಿಕಾರಿಗಳ ಅಭಿಯೋಜನೆಗೆ ದಿನಾಂಕ: 09.09.2020 ರ ಆದೇಶದಲ್ಲಿ ಕಲಂ 197 ಸಿಆರ್ ಪಿಸಿ ಅಡಿಯಲ್ಲಿ ರಾಜ್ಯ ಸರ್ಕಾರವು ಅಭಿಯೋಜನಾ ಮಂಜೂರಾತಿಯನ್ನು ನೀಡಿರುತ್ತದೆ.<br><br>ಭ್ರಷ್ಟಾಚಾರ ಕಾಯ್ದೆ ಅಡಿಯಲ್ಲಿ ಅಭಿಯೋಜನೆಗೆ ಒಳಪಡಿಸಲು ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರ ಕುರಿತಂತೆ ದಿನಾಂಕ: 16.03.2022 ರಂದು ಹಾಗೂ ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರ ಕುರಿತಂತೆ ದಿನಾಂಕ: 16.07.2023 ರಂದು ಕೇಂದ್ರ ಸರ್ಕಾರವು ಅಭಿಯೋಜನಾ ಮಂಜೂರಾತಿಯನ್ನು ನೀಡಿರುತ್ತದೆ. |
| ಇ) | ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲಿನ ಆರೋಪದ ಕುರಿತು ಯು.ಪಿ.ಎಸ್‌ಸಿ ಮತ್ತು ಕೇಂದ್ರ ಗೃಹ ಇಲಾಖೆಗೆ ಪತ್ರ ಬರೆಯಲಾಗಿದೆಯೇ; ಯಾವ ದಿನಾಂಕದಂದು ಪತ್ರ ಬರೆಯಲಾಗಿದೆ; ಭ್ರಷ್ಟ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ನಿಯಮದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಶ್ರೀ ಅಜಯ್ ಹಿಲೋರಿ, ಐಪಿಎಸ್ ಮತ್ತು ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆಗಳಲ್ಲಿ ಸದರಿ ಅಧಿಕಾರಿಗಳ ವಿರುದ್ಧ ಆರೋಪಗಳು ಸಾಬೀತಾಗಿರುವುದಿಲ್ಲ. |

--3

| | | |
|---|---|---|
| ಈ) | ಐಪಿಎಸ್ ಅಧಿಕಾರಿಗಳು ಈ ಪ್ರಕರಣದಲ್ಲಿ ಭಾಗಿಯಾಗಿರುವ ಕಾರಣಕ್ಕಾಗಿ ಅವರನ್ನು ರಕ್ಷಿಸಲು ಮತ್ತು ಕೆಳಹಂತದ ಅಧಿಕಾರಿಗಳನ್ನು ಮಾತ್ರವೇ ಶಿಕ್ಷಿಸಲು ಲಾಭಿ ನಡೆಯುತ್ತಿರುವ ಕುರಿತು ಸರ್ಕಾರದ ನಿಲುವೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಸಿಆಸುಇ 327 ಎಸ್‌ಪಿಎಸ್ 2023

**( ಸಿದ್ದರಾಮಯ್ಯ )**
ಮುಖ್ಯಮಂತ್ರಿ